**All India Radio: Bangalore**
**National Bulletins In Kannada**
**29.07.2025 / 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಉಭಯ ಸದನಗಳಲ್ಲಿಂದು ಆಪರೇಷನ್ ಸಿಂದೂರ ಕುರಿತು ವಿಶೇಷ ಚರ್ಚೆ

೨. ನವದೆಹಲಿಯಲ್ಲಿಂದು ’ಅಖಿಲ ಭಾರತೀಯ ಶಿಕ್ಷಾ ಸಮಾಗಮ್’ ಉದ್ಘಾಟಿಸಿದ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್

೩. ಶ್ರೀಹರಿಕೋಟಾದಿಂದ ನಾಳೆ ಸಂಜೆ ೫.೪೦ ಕ್ಕೆ ನಿಸಾರ್ ಉಪಗ್ರಹ ಉಡಾವಣೆ

೪. ಡಿಆರ್‌ಡಿಒ ದಿಂದ ’ಪ್ರಳಯ್’ ಕ್ಷಿಪಣಿ ಪರೀಕ್ಷಾರ್ಥ ಹಾರಾಟ ಯಶಸ್ವಿ

<><*<><>*><>

ಲೋಕಸಭೆಯಲ್ಲಿಂದು ಆಪರೇಷನ್ ಸಿಂದೂರ ಕುರಿತು ವಿಶೇಷ ಚರ್ಚೆ ಮುಂದುವರೆಯಿತು. ಸದನವನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಪಹಲ್ಗಾಮ್ ದಾಳಿಯ ನಂತರ ಭಾರತ ತನ್ನದೇ ಆದ ನಿಯಮಗಳನ್ನು ನಿಗದಿಪಡಿಸಿದೆ ಎಂದು ಪ್ರತಿಪಾದಿಸಿದರು. ಪರಮಾಣು ಬೆದರಿಕೆಗಳು ಇನ್ನು ಮುಂದೆ ಭಾರತದ ಕ್ರಮವನ್ನು ತಡೆಯುವುದಿಲ್ಲ. ಭಯೋತ್ಪಾದಕರು ಮತ್ತು ಅವರನ್ನು ಬೆಂಬಲಿಸುವ ಅಥವಾ ಆಶ್ರಯ ನೀಡುವವರ ನಡುವೆ ಯಾವುದೇ ವ್ಯತ್ಯಾಸವಿಲ್ಲ ಎಂದು ಅವರು ಹೇಳಿದರು. ಪಹಲ್ಗಾಮ್ ದಾಳಿಗೆ ಪ್ರತೀಕಾರವಾಗಿ ಭಾರತವು ಮೇ ೬ ರ ಮಧ್ಯರಾತ್ರಿ ತನ್ನ ಯೋಜನೆಯನ್ನು ನಿಖರವಾಗಿ ಕಾರ್ಯಗತಗೊಳಿಸಿತು. ಬಹವಾಲ್ಪುರ್ ಮತ್ತು ಮುರಿಡ್ಕೆಯಲ್ಲಿನ ಭಯೋತ್ಪಾದಕ ನೆಲೆಗಳನ್ನು ಧ್ವಂಸಗೊಳಿಸಲಾಯಿತು ಎಂದರು. ದೇಶೀಯವಾಗಿ ಅಭಿವೃದ್ಧಿಪಡಿಸಿದ ಡ್ರೋನ್‌ಗಳು ಭಯೋತ್ಪಾದಕ ಮೂಲಸೌಕರ್ಯವನ್ನು ನಾಶಪಡಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸಿವೆ. ಇದು ತಂತ್ರಜ್ಞಾನ ಆಧಾರಿತ ಯುದ್ಧದ ಯುಗ. ಆಪರೇಷನ್ ಸಿಂದೂರ ಭಾರತದ ಸಾಮರ್ಥ್ಯವನ್ನು ಪ್ರದರ್ಶಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

<><*<><>*><>

ಲೋಕಸಭೆಯಲ್ಲಿಂದು ಚರ್ಚೆಯಲ್ಲಿ ಭಾಗವಹಿಸಿದ್ದ ಕೇಂದ್ರ ಗೃಹ ಸಚಿವ ಅಮಿತ್ ಶಾ, ಆಪರೇಷನ್ ಮಹಾದೇವ ಅಡಿಯಲ್ಲಿ ನಿನ್ನೆ ನಡೆದ ಕಾರ್ಯಾಚರಣೆಯಲ್ಲಿ ಭಾರತೀಯ ಸೇನೆ, ಸಿಆರ್‌ಪಿಎಫ್ ಹಾಗೂ ಜಮ್ಮು-ಕಾಶ್ಮೀರ ಪೊಲೀಸರು ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಭಾಗಿಯಾಗಿದ್ದ ಮೂವರು ಭಯೋತ್ಪಾದಕರನ್ನು ಹೊಡೆದುರುಳಿಸಿದ್ದಾರೆ ಎಂದು ತಿಳಿಸಿದರು. ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಬಳಸಲಾದ ಮೂರು ರೈಫಲ್‌ಗಳನ್ನು ಭಯೋತ್ಪಾದಕರಿಂದ ವಶಪಡಿಸಿಕೊಳ್ಳಲಾಗಿದೆ. ಸುಲೇಮಾನ್ ಶಾ, ಜಿಬ್ರಾನ್ ಮತ್ತು ಹಮ್ಜಾ ಅಫ್ಘಾನಿ ಎಂಬ ಮೂವರು ಭಯೋತ್ಪಾದಕರನ್ನು ಹತ್ಯೆ ಮಾಡಲಾಗಿದೆ ಎಂದು ಮಾಹಿತಿ ನೀಡಿದರು. ಸುಲೇಮಾನ್, ಪಹಲ್ಗಾಮ್ ಮತ್ತು ಗಗಂಗೀರ್ ಭಯೋತ್ಪಾದಕ ದಾಳಿಯಲ್ಲಿ ಪಾಲ್ಗೊಂಡಿದ್ದ. ಆತನ ಪಾತ್ರದ ಕುರಿತು ಗುಪ್ತಚರ ಸಂಸ್ಥೆಗಳು ಸಾಕಷ್ಟು ಪುರಾವೆಗಳನ್ನು ಹೊಂದಿವೆ ಎಂದರು. ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಅಮಾಯಕ ಪ್ರವಾಸಿಗರನ್ನು ಅವರ ಕುಟುಂಬ ಸದಸ್ಯರ ಎದುರೇ ಕ್ರೂರವಾಗಿ

ಹತ್ಯೆಮಾಡಲಾಯಿತು. ಇದಕ್ಕೆ ಪ್ರತ್ಯುತ್ತರವಾಗಿ ಕೇಂದ್ರ ಸರ್ಕಾರದಿಂದ ಆಪರೇಷನ್ ಸಿಂದೂರ ವನ್ನು ಮೇ ೭ ರಂದು ಪ್ರಾರಂಭಿಸಲಾಯಿತು. ಅಂದು ಮಧ್ಯರಾತ್ರಿ ೧ ಗಂಟೆ ೪ ನಿಮಿಷದಿಂದ ೧ ಗಂಟೆ ೨೪ ನಿಮಷಗಳ ನಡುವೆ ಪಾಕಿಸ್ತಾನದ ೯ ಭಯೋತ್ಪಾದಕ ತಾಣಗಳನ್ನು ನಾಶಪಡಿಸಲಾಯಿತು. ಕಾರ್ಯಾಚರಣೆಯಲ್ಲಿ ನೂರಕ್ಕೂ ಹೆಚ್ಚು ಭಯೋತ್ಪಾದಕರನ್ನು ಹೊಡೆದುರುಳಿಸಲಾಯಿತು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ವಿವರಿಸಿದರು.

<><*<><>*><>

ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯೆಯಾಗಿ ಭಾರತ ನಡೆಸಿದ ಆಪರೇಷನ್ ಸಿಂದೂರ ಕುರಿತು ರಾಜ್ಯಸಭೆಯಲ್ಲಿಂದು ವಿಶೇಷ ಚರ್ಚೆ ನಡೆಯಿತು. ಚರ್ಚೆ ಆರಂಭಿಸಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಪಹಲ್ಗಾಮ್‌ನಲ್ಲಿ ೨೬ ಅಮಾಯಕ ಪ್ರವಾಸಿಗರನ್ನು ಕ್ರೂರವಾಗಿ ಹತ್ಯೆ ಮಾಡಿದ ಮೂವರು ಭಯೋತ್ಪಾದಕರನ್ನು ಹೊಡೆದುರುಳಿಸಿದ್ದಕ್ಕಾಗಿ ಭಾರತೀಯ ಸೇನೆ ಮತ್ತು ಭದ್ರತಾ ಪಡೆಗಳನ್ನು ಅಭಿನಂದಿಸಿದರು. ಭಯೋತ್ಪಾದಕ ಅಡಗುತಾಣಗಳನ್ನು ನಾಶಪಡಿಸುವುದು ಮತ್ತು ಭಯೋತ್ಪಾದನೆ ವಿರುದ್ಧ ಭಾರತ ಶೂನ್ಯ ಸಹಿಷ್ಣುತೆ ಹೊಂದಿದೆ ಎಂಬ ಸ್ಪಷ್ಟ ಸಂದೇಶವನ್ನು ಕಳುಹಿಸುವುದು ಆಪರೇಷನ್ ಸಿಂದೂರದ ಉದ್ದೇಶವಾಗಿದೆ ಎಂದು ತಿಳಿಸಿದರು. ದೇಶದ ಭವಿಷ್ಯವನ್ನು ರೂಪಿಸುವಲ್ಲಿ ಆಪರೇಷನ್ ಸಿಂದೂರದ ಪಾತ್ರ ಅತ್ಯಂತ ಮುಖ್ಯವಾಗಿದೆ. ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲಿನ ಹೇಡಿತನದ ದಾಳಿಗೆ ಪ್ರತೀಕಾರವಾಗಿ, ಭಾರತೀಯ ಸಶಸ್ತ್ರಪಡೆಗಳು ಪಾಕಿಸ್ತಾನಕ್ಕೆ ಸೂಕ್ತ ಉತ್ತರವನ್ನು ನೀಡಿ ನೂರಕ್ಕೂ ಹೆಚ್ಚು ಭಯೋತ್ಪಾದಕರನ್ನು ಹೊಡೆದುರುಳಿಸಿದವು ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದರು.

<><*<><>*><>

ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆಯನ್ನು ೨೦೨೫ ರ ಆಗಸ್ಟ್ ೧೩ ರಿಂದ ಜಾರಿಗೆ ಬರುವಂತೆ ಆರು ತಿಂಗಳ ಅವಧಿಗೆ ವಿಸ್ತರಿಸುವ ನಿರ್ಣಯವನ್ನು ಪರಿಗಣಿಸಲು ವ್ಯವಹಾರ ಸಲಹಾ ಸಮಿತಿಯು ರಾಜ್ಯಸಭೆಯಲ್ಲಿ ಚರ್ಚೆಗೆ ಎರಡು ಗಂಟೆ ಸಮಯವನ್ನು ನಿಗದಿಪಡಿಸಿದೆ. ಉಪಸಭಾಪತಿ ಹರಿವಂಶ್ ರಾಜ್ಯಸಭೆಯಲ್ಲಿಂದು ಈ ವಿಷಯವನ್ನು ಘೋಷಿಸಿದರು. ರಾಜ್ಯದಲ್ಲಿ ರಾಷ್ಟ್ರಪತಿ ಆಳ್ವಿಕೆಯನ್ನು ವಿಸ್ತರಿಸಲು ಕೇಂದ್ರ ಗೃಹ ಸಚಿವ ಅಮಿತ್ ಶಾ ರಾಜ್ಯಸಭೆಯಲ್ಲಿ ಈ ನಿರ್ಣಯವನ್ನು ಮಂಡಿಸಲಿದ್ದಾರೆ. ಮಣಿಪುರ ಮುಖ್ಯಮಂತ್ರಿ ಎನ್.ಬಿರೇನ್ ಸಿಂಗ್ ಅವರ ರಾಜೀನಾಮೆಯ ನಂತರ ಈ ವರ್ಷದ ಫೆಬ್ರವರಿ ೧೩ ರಂದು ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆ ಜಾರಿಯಾಯಿತು.

<><*<><>*><>

೨೦೨೫-೨೬ನೇ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ಸರಾಸರಿ ಮಾಸಿಕ ನಿವ್ವಳ ಜಿಎಸ್‌ಟಿ ಸಂಗ್ರಹವು ಶೇಕಡಾ ೧೦.೭ ರಷ್ಟು ಏರಿಕೆಯಾಗಿ ೧ ಲಕ್ಷದ ೮೦ ಸಾವಿರದ ೭೭೪ ಕೋಟಿ ರೂಪಾಯಿಗಳಿಗೆ ತಲುಪಿದೆ ಎಂದು ಕೇಂದ್ರ ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ ಮಾಹಿತಿ ನೀಡಿದರು. ರಾಜ್ಯಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಸಚಿವರು, ಜಿಎಸ್‌ಟಿ ಮಂಡಳಿಯ ಶಿಫಾರಸುಗಳ ಮೇರೆಗೆ ಸಣ್ಣ ವ್ಯಾಪಾರ ವಲಯದ ಪ್ರಯೋಜನಕ್ಕಾಗಿ ಸರ್ಕಾರವು ಹಲವಾರು ಕ್ರಮಗಳನ್ನು ತೆಗೆದುಕೊಂಡಿದೆ ಎಂದು ಹೇಳಿದರು. ಈ ಕ್ರಮಗಳಲ್ಲಿ ಸಣ್ಣ ಮತ್ತು ಮಧ್ಯಮ ಉದ್ಯಮಗಳು ಒಂದು ಹಣಕಾಸು ವರ್ಷದಲ್ಲಿ ಅವರ ಒಟ್ಟು ವಹಿವಾಟು ೪೦ ಲಕ್ಷ ರೂಪಾಯಿ ಮೀರದಿದ್ದರೆ ಜಿಎಸ್‌ಟಿ ನೋಂದಣಿ ಪಡೆಯುವ ಅಗತ್ಯದಿಂದ ವಿನಾಯಿತಿ ನೀಡುವುದು ಸೇರಿದೆ ಎಂದು ಅವರು ತಿಳಿಸಿದರು. ಅದೇ ರೀತಿ, ರಾಜ್ಯದೊಳಗೆ ಅಥವಾ ಅಂತರರಾಜ್ಯ ತೆರಿಗೆ ವಿಧಿಸಬಹುದಾದ ಸೇವೆಗಳ ಪೂರೈಕೆಯಲ್ಲಿ ತೊಡಗಿರುವ ವ್ಯಕ್ತಿಗಳು ಸಹ, ಒಂದು ಹಣಕಾಸು ವರ್ಷದಲ್ಲಿ ಅವರ ಒಟ್ಟು

ವಹಿವಾಟು ೨೦ ಲಕ್ಷ ರೂಪಾಯಿ ಮೀರದಿದ್ದರೆ ಜಿಎಸ್‌ಟಿ ನೋಂದಣಿ ಅಗತ್ಯವಿಲ್ಲ ಎಂದು ಸಚಿವ ಪಂಕಜ್ ಚೌಧರಿ ಮಾಹಿತಿ ನೀಡಿದರು.

**<><*<><>*><>**

ಭಾರತವು ವಿಶೇಷವಾಗಿ ಕಡಲಾಚೆಯ ಪ್ರದೇಶಗಳಲ್ಲಿ ತೈಲ ಮತ್ತು ಅನಿಲ ಪರಿಶೋಧನೆಯಲ್ಲಿ ಹೊಸ ಎತ್ತರಕ್ಕೆ ಏರಿದೆ. ಈ ಸಾಧನೆಯು, ದೇಶದ ವ್ಯಾಪಕ ಬಳಕೆಯಾಗದ ಹೈಡ್ರೋಕಾರ್ಬನ್ ಸಾಮರ್ಥ್ಯವನ್ನು ಒತ್ತು ಹೇಳುತ್ತದೆ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಹೇಳಿದ್ದಾರೆ. ರಾಜ್ಯಸಭೆಯಲ್ಲಿಂದು ಚುಕ್ಕೆ ಗುರುತಿನ ಪ್ರಶ್ನೆಗೆ ಲಿಖಿತ ಉತ್ತರ ನೀಡಿದ ಅವರು, ೨೦೧೫ ರಿಂದ ಭಾರತದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪರಿಶೋಧನೆ ಮತ್ತು ಉತ್ಪಾದನಾ ಕಂಪನಿಗಳು ಕಡಲಾಚೆಗಿನ ಪ್ರದೇಶಗಳಲ್ಲಿ ೬೨ ಸೇರಿದಂತೆ ಒಟ್ಟಾರೆ ೧೬೨ ಹೈಡ್ರೋಕಾರ್ಬನ್ ಆವಿಷ್ಕಾರಗಳನ್ನು ವರದಿ ಮಾಡಿವೆ ಎಂದು ತಿಳಿಸಿದರು.

**<><*<><>*><>**

ಈ ವರ್ಷದ ಜೂನ್ ೩೦ ರ ವೇಳೆಗೆ ಪ್ರಧಾನ ಮಂತ್ರಿ ಭಾರತೀಯ ಜನೌಷಧ ಪರಿಯೋಜನಾ ಅಡಿಯಲ್ಲಿ ಒಟ್ಟು ೧೬ ಸಾವಿರ ೯೧೨ ಜನೌಷಧ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಖಾತೆ ರಾಜ್ಯ ಸಚಿವೆ ಅನುಪ್ರಿಯಾ ಪಟೇಲ್ ಹೇಳಿದ್ದಾರೆ. ರಾಜ್ಯಸಭೆಯಲ್ಲಿ ಇಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಸಚಿವರು, ೨೦೨೭ ರ ಮಾರ್ಚ್ ವೇಳೆಗೆ ೨೫ ಸಾವಿರ ಜನೌಷಧ ಕೇಂದ್ರಗಳನ್ನು ತೆರೆಯುವ ಗುರಿಯನ್ನು ಸರ್ಕಾರ ಹೊಂದಿದೆ ಎಂದು ತಿಳಿಸಿದರು.

**<><*<><>*><>**

ರಾಷ್ಟ್ರೀಯ ಶಿಕ್ಷಣ ನೀತಿ-೨೦೨೦ ವಿಶ್ವದರ್ಜೆಯ ಶಿಕ್ಷಣವನ್ನು ಸಾರ್ವತ್ರಿಕವಾಗಿ ಉತ್ತೇಜಿಸಲು ವಿನ್ಯಾಸಗೊಳಿಸಲಾಗಿದೆ. ೨೦೪೭ರ ವಿಕಸಿತ ಭಾರತ ದೃಷ್ಟಿಕೋನವನ್ನು ಸಾಧಿಸುವ ಅತ್ಯಂತ ಮಹತ್ವದ ಮಾರ್ಗವಾಗಿದೆ ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಹೇಳಿದ್ದಾರೆ. ನವದೆಹಲಿಯ ಭಾರತ ಮಂಟಪಂನಲ್ಲಿಂದು ನಡೆದ 'ಅಖಿಲ ಭಾರತೀಯ ಶಿಕ್ಷಾ ಸಮಾಗಮ್-೨೦೨೫' ಉದ್ಘಾಟಿಸಿ ಮಾತನಾಡಿದ ಅವರು, ರಾಷ್ಟ್ರೀಯ ಶಿಕ್ಷಣ ನೀತಿ-೨೦೨೦ ಭಾರತೀಯ ಶಿಕ್ಷಣ ವ್ಯವಸ್ಥೆಯಲ್ಲಿ ಪರಿವರ್ತನಾತ್ಮಕ ಪುನರುಜ್ಜೀವನಗೊಳಿಸುತ್ತಿದೆ ಎಂದರು.

**<><*<><>*><>**

ಇಸ್ರೊ ಮತ್ತು ನಾಸಾ ಸಂಸ್ಥೆ ಜಂಟಿಯಾಗಿ ಅಭಿವೃದ್ಧಿಪಡಿಸಿರುವ ಭೂ ಸಮೀಕ್ಷೆಯ ಸಿಂಥೆಟಿಕ್ ಅಪರ್ಚರ್ ರೇಡಾರ್ -ನಿಸಾರ್ ಉಪಗ್ರಹವನ್ನು ನಾಳೆ ಸಂಜೆ ೫.೪೦ಕ್ಕೆ ಉಡ್ಡಯನ ಮಾಡಲಾಗುವುದು ಎಂದು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ- ಇಸ್ರೋ ತಿಳಿಸಿದೆ. ಸಿಂಥೆಟಿಕ್ ಅಪರ್ಚರ್ ರೇಡಾರ್ ಎಂಬ ವಿಶಿಷ್ಟ ಭೂ ವೀಕ್ಷಣಾ ಉಪಗ್ರಹ ಶ್ರೀಹರಿಕೋಟದಿಂದ ಉSಐಗಿ-ಈ೧೬ ರಾಕೆಟ್ ಮೂಲಕ ಉಡ್ಡಯನ ಮಾಡಲಾಗುವುದು. ಈ ಉಪಗ್ರಹ ಉಡಾವಣೆಯಿಂದ ಭಾರತ, ಅಮೆರಿಕ ಸೇರಿದಂತೆ ಇಡೀ ಜಗತ್ತಿಗೆ ನೆರವಾಗಲಿದೆ.

**<><*<><>*><>**

ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ - ಡಿ.ಆರ್.ಡಿ.ಒ, ಅತ್ಯಾಧುನಿಕ 'ಪ್ರಳಯ್' ಕ್ಷಿಪಣಿಯ ಎರಡು ಪರೀಕ್ಷಾರ್ಥ ಹಾರಾಟವನ್ನು ಒಡಿಶಾ ಕರಾವಳಿಯ ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ದ್ವೀಪದಲ್ಲಿ ಯಶಸ್ವಿಯಾಗಿ ನಡೆಸಿದೆ.  ನಿನ್ನೆ ಮತ್ತು ಇಂದು ನಡೆಸಿದ ಈ ಪರೀಕ್ಷೆಗಳು ಕ್ಷಿಪಣಿಯ ಗರಿಷ್ಟ ಮತ್ತು ಕನಿಷ್ಠ ವ್ಯಾಪ್ತಿಯ ಸಾಮರ್ಥ್ಯವನ್ನು ನಿಖರವಾಗಿ ಪ್ರಮಾಣೀಕರಿಸಿದೆ. ಡಿಆರ್‌ಡಿಒ ಅಭಿವೃದ್ಧಿಪಡಿಸಿದ

ಪ್ರಳಯ್ - ಸ್ವದೇಶಿ ಘನ ಇಂಧನ ಆಧಾರಿತ ಕ್ವಾಸಿ-ಬ್ಯಾಲಿಸ್ಟಿಕ್ ಕ್ಷಿಪಣಿ ಆಗಿದೆ. ಇದು ಅತಿಹೆಚ್ಚು ನಿಖರತೆಯನ್ನು ಸಾಧಿಸಲು ಆಧುನಿಕ ಮಾರ್ಗದರ್ಶನ ಹಾಗೂ ನಾವಿಗೇಶನ್ ತಂತ್ರಜ್ಞಾನವನ್ನು ಬಳಸುತ್ತದೆ. ಈ ಕ್ಷಿಪಣಿ ಹಲವು ಗುರಿಗಳನ್ನು ನಾಶಪಡಿಸಬಲ್ಲ ವಿವಿಧ ಸಿಡಿತಲೆಗಳನ್ನು ಹೊತ್ತೊಯ್ಯುವ ಸಾಮರ್ಥ್ಯ ಹೊಂದಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**